# <u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಜೇವರ್ಗಿ.</u>

## <u>ಸಿ ಸಿ ನಂ. 724/2023</u>

**<u>ಫಿರ್ಯಾದಿದಾರರು :-</u>** ನೆಲೋಗಿ ಪೊಲೀಸ್ ಠಾಣೆ

**: ವಿರುದ್ದ :**

**<u>ಆರೋಪಿತರು:</u>**

ಸಿದ್ರಾಮ ತಂದೆ ಹಣಮಂತ ಆಲೂರ
ವಃ 25 ವರ್ಷ, ಉಃ ಒಕಲುತನ
ಸಾಃ ಕೂಟನೂರ, ತಾಃ ಜೇವರ್ಗಿ

**<u>ದೋಷಾರೋಪಣೆ</u>**

**ಶ್ರೀ ಕಾಶಿನಾಥ ವಿ. ಉಪ್ಪಾರ್, ಬಿ.ಎಸ್.ಸಿ. ಎಲ್ಎಲ್.ಬಿ.,** ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಜೇವರ್ಗಿ, ಆದ ನಾನು, ಆರೋಪಿತರಾದ ನಿಮ್ಮ ವಿರುದ್ದ ಈ ಕೆಳಕಾಣಿಸಿದ ಅಪಾದನೆಗಳನ್ನು ರೂಪಿಸಿರುತ್ತೆನೆ.

ಆರೋಪಿತನಾದ ನೀವು ದಿನಾಂಕ 29-08-2023 ರಂದು ಮುಂಜಾನೆ 0-50 ಗಂಟೆ ಸಮಯದಲ್ಲಿ ನೆಲೋಗಿ ಪೊಲೀಸ ಠಾಣೆ ವ್ಯಾಪ್ತಿಯಲ್ಲಿ ಬರುವ ಕೂಟನೂರ ಗ್ರಾಮದ ಭೀಮಾ ನದಿಯ ದಂಡೆಯಲ್ಲಿ, ಆರೋಪಿತನಾದ ನೀನು ನಿಮ್ಮ ಮೆಸ್ಸಿ ಫರ್ಗುಸನ ಟ್ರ್ಯಾಕ್ಟರ ನಂ.ಕೆಎ-33/ಟಿಎ-4046, ಟ್ರಾಲಿ ನಂ.ಕೆಎ-32/ಟಿಎ-7727 ನೆದ್ದರಲ್ಲಿ ಯಾವುದೇ ಅಧಿಕೃತ ಪರವಾನಿಗೆ ಇಲ್ಲದೆ, ಕಳ್ಳತನ ಮಾಡುವ ಉದ್ದೇಶದಿಂದ ಸದರಿ ಟಿಪ್ಪರನಲ್ಲಿ ಮರಳನ್ನು ಕಳ್ಳತನದಿಂದ ತುಂಬಲು ಪ್ರಯುತ್ನಿಸಿರುತ್ತಿರಿ, ಆದ್ದರಿಂದ ನೀವು ಭಾ. ದಂ. ಸಂ. ಕಲಂ **379, 511** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತಿರಿ, ಅದು ನನ್ನ ಸಂಜ್ಞೆಯ ಅಡಿಯಲ್ಲಿ ಬರುತ್ತದೆ.

ನೀವು ಮೇಲೆ ಹೇಳಿದ ಅಪಾದನೆಗೆ ಈ ನ್ಯಾಯಾಲಯದ ಮುಂದೆ ನೀವು ವಿಚಾರಣೆ ಎದುರಿಸಬೇಕೆಂದು ಆದೇಶಿಸುತ್ತೇನೆ.

ದಿನಾಂಕ **09-07-2025** ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.

**ಆರೋಪಿಗಳ ಹೇಳಿಕೆ**

ಪ್ರಶ್ನೆ-1: ಈಗ ನಿಮಗೆ ತಿಳಿದ ಭಾಷೆಯಲ್ಲಿ ಓದಿ ಹೇಳಿದ ಆರೋಪಣೆಯನ್ನು ಅರ್ಥಮಾಡಿಕೊಂಡಿದಿರಾ?

ಉ: ಆ-

ಪ್ರಶ್ನೆ -2: ಆರೋಪಣೆಯನ್ನು ಒಪ್ಪುವಿರಾ ಅಥವಾ ವಿಚಾರಣೆ ನಡೆಸಬೇಕೆ?

ಉ: ಆ-

(ಈ ಮೂಲಕ ದೃಢೀಕರಿಸುವುದೇನೆಂದರೆ ಮೇಲೆ ಕೊಟ್ಟಂತಹ ಹೇಳಿಕೆಗಳು ಆರೋಪಿತರ ನಿಜವಾದ ಹೇಳಿಕೆಗಳಿರುತ್ತವೆಂದು ಪ್ರಮಾಣಿಕರಿಸಲಾಗಿದೆ)

ದಿನಾಂಕ **09-07-2025** ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.